ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ಕಾಮಗಾರಿಗಳು ಪ್ರಗತಿಯಲ್ಲಿವೆ.

3. 2012–13ನೇ ಸಾಲಿನಲ್ಲಿ ಬಂಡೆ ರಂಗನಾಥಸ್ವಾಮಿ ದೇವಸ್ಥಾನಕ್ಕೆ ಮೆಟ್ಟಿಲುಗಳ ನಿರ್ಮಾಣ, ರೈಲಿಂಗ್ಸ್ ಅಳವಡಿಕೆ, ಕುಡಿಯುವ ನೀರು ಸೌಲಭ್ಯ, ಶೌಚಾಲಯ ನಿರ್ಮಾಣ, ಬೆಟ್ಟದ ದಾರಿಯಲ್ಲಿ ಅಲ್ಲಲ್ಲಿ ಭಕ್ತರು/ಪ್ರವಾಸಿಗರಿಗೆ ವಿಶ್ರಾಂತಿ ಪಡೆಯಲು ಶೆಲ್ಟರ್ ನಿರ್ಮಾಣ ಮುಂತಾದ ಪ್ರವಾಸಿ ಸೌಲಭ್ಯಗಳ ಕಾಮಗಾರಿಗಳನ್ನು ₹ 80.00 ಲಕ್ಷಗಳ ಅಂದಾಜಿನಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಐ.ಡಿ.ಎಲ್. ಬೆಂಗಳೂರು ರವರ ಮೂಲಕ ಕೈಗೊಂಡಿದ್ದು, ₹ 80.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ಕಾಮಗಾರಿಗಳು ಪ್ರಗತಿಯಲ್ಲಿವೆ.

ಕುಡಿಯುವ ನೀರಿನ ಸಮಸ್ಯೆ

1434(2605), ಶ್ರೀ ದೇವೇಗೌಡ ಜಿ.ಟಿ. (ಚಾಮುಂಡೇಶ್ವರಿ)

ಅ) ಮೈಸೂರು ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ನೀರಿನ ಸಮಸ್ಯೆಯನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ತೀವ್ರತೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಈ ತೀವ್ರತೆಯನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್.ಕೆ.ಪಾಟೀಲ್(ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ಬಂದಿದೆ.

ಆ) ನೀರಿನ ಸಮಸ್ಯೆ ಬಗೆಹರಿಸಲು 2013–14ನೇ ಸಾಲಿನಲ್ಲಿ ಈ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗಿದೆ.

ಕ್ರ ಸಂ	ಯೋಜನೆ	ಮಂಜೂರಾದ ಕಾಮಗಾರಿಗಳ ಸಂಖ್ಯೆ	ಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆ	ಪ್ರಗತಿಯಲ್ಲಿರುವ ಕಾಮಗಾರಿಗಳ ಸಂಖ್ಯೆ	ಬಿಡುಗಡೆಯಾದ ಅನುದಾನ ₹ ಲಕ್ಷಗಳಲ್ಲಿ
1	ಎನ್.ಆರ್.ಡಿ.ಡಬ್ಲ್ಯೂ.ಪಿ.	3427	2858	569	11782.75
2	ಟಾಸ್ಕ್ ಫೋರ್ಸ್	637	600	37	620.00
3	ಬರ ಪರಿಹಾರ	175	143	32	390.85
	ಒಟ್ಟು	**4239**	**3601**	**638**	**12802.60**

ಇ) ಬಂದಿದೆ.

ಈ) 2013–14ನೇ ಸಾಲಿನಲ್ಲಿ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರಕ್ಕೆ NRDWP ಯೋಜನೆಯಡಿ ₹ 3805.50 ಲಕ್ಷ ಅನುದಾನದಲ್ಲಿ 295 ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಈ ಪೈಕಿ 205 ಕಾಮಗಾರಿಗಳು ಪೂರ್ಣಗೊಂಡಿರುತ್ತವೆ.

- 2013–14ನೇ ಸಾಲಿನ ಟಾಸ್ಕ್‌ಫೋರ್ಸ್ ಸಮಿತಿ ಶಿಫಾರಸ್ ಆಧರಿಸಿ ₹ 63.85 ಲಕ್ಷ ಅನುದಾನದಲ್ಲಿ 83 ಕಾಮಗಾರಿಗಳನ್ನು ಕೈಗೊಂಡಿದ್ದು, ಎಲ್ಲಾ ಕಾಮಗಾರಿಗಳು ಪೂರ್ಣಗೊಂಡಿವೆ.

- 2014–15ನೇ ಸಾಲಿಗೆ ಟಾಸ್ಕ್‌ಫೋರ್ಸ್ ಸಮಿತಿ ಶಿಫಾರಸಿನನ್ವಯ ₹ 24.70 ಲಕ್ಷಗಳ ಅನುದಾನದಲ್ಲಿ 26 ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ.

ಕುಡಿಯುವ ನೀರಿನ ಸಮಸ್ಯೆಯಿರುವ ಜಯಪುರ ಹೋಬಳಿಯ 19 ಗ್ರಾಮಗಳಿಗೆ ಟ್ಯಾಂಕರ್ ಮುಖಾಂತರ ಕುಡಿಯುವ ನೀರು ಸರಬರಾಜು ಮಾಡಲು ₹ 275.81 ಲಕ್ಷ ವೆಚ್ಚ ಮಾಡಲಾಗಿದೆ. 2014–15ರ ಸಾಲಿನ ಕ್ರಿಯಾಯೋಜನೆಯಡಿ ಸಮಸ್ಯಾತ್ಮಕ ಗ್ರಾಮಗಳನ್ನು ಆವರಿಸಲು ಮೈಸೂರು ಜಿಲ್ಲಾ ಪಂಚಾಯತಿ ಕ್ರಿಯಾಯೋಜನೆ ರೂಪಿಸಿದೆ.

ಬೆಳ್ಳಟ್ಟಿ ಗ್ರಾಮಕ್ಕೆ ಪದವಿ ಕಾಲೇಜು ಪ್ರಾರಂಭ

1435(2060), ಶ್ರೀ ದೊಡ್ಡಮನಿ ರಾಮಕೃಷ್ಣ ಸಿದ್ದಲಿಂಗಪ್ಪ (ಶಿರಹಟ್ಟಿ)

ಅ) ಶಿರಹಟ್ಟಿ ಮತಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಬೆಳ್ಳಟ್ಟಿ ಗ್ರಾಮಕ್ಕೆ ಪದವಿ ಕಾಲೇಜು ಪ್ರಾರಂಭ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; ಇನ್ನೆಷ್ಟು ಅವಧಿಯೊಳಗಾಗಿ ಬೆಳ್ಳಟ್ಟಿ ಗ್ರಾಮಕ್ಕೆ ಪದವಿ ಕಾಲೇಜನ್ನು ಮಂಜೂರು ಮಾಡಲಾಗುವುದು?

ಶ್ರೀ ಆರ್.ವಿ.ದೇಶಪಾಂಡೆ(ಮಾನ್ಯ ಉನ್ನತ ಶಿಕ್ಷಣ ಸಚಿವರು)

ಅ) ಹೌದು.

ಆ) ಪರಿಶೀಲಿಸಲಾಗುತ್ತಿದ್ದು, ಅನುದಾನದ ಲಭ್ಯತೆ ಮತ್ತು ಅಗತ್ಯತೆ ಅನುಸಾರ ಕ್ರಮವಹಿಸಲಾಗುತ್ತಿದೆ.